For more job news visit : www.kpscvaani.com

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ

ದೂರವಾಣಿ:08194-225713 E-Mail: dudc_ctg@yahoo.co.in ಜಿಲ್ಲಾಧಿಕಾರಿಗಳ ಕಛೇರಿ ಚಿತ್ರದುರ್ಗ

ಸಂಖ್ಯೆ: ಜಿನಕೋ(1)/ಸಿಬ್ಬಂದಿ/ಸಿಆರ್-74/2024-25 ದಿನಾಂಕ:06.11.2024.

## ಅಧಿಸೂಚನೆ

ವಿಷಯ:- ಕರ್ನಾಟಕ ಪುರಸಭೆಗಳ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಖಾಲಿ ಇರುವ ಪೌರಕಾರ್ಮಿಕ) ಪೌರಕಾರ್ಮಿಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:
1. ಕರ್ನಾಟಕ ಪುರಸಭೆಗಳ ವೃಂದ ಮತ್ತು ನೇಮಕಾತಿ ನಿಯಮಗಳು-2010 ರನ್ವಯ
2. ಸರ್ಕಾರದ ಅಧಿಸೂಚನೆ ಸಂ:ನಅಇ/176/ಜಿಇಎಲ್/22(ಭಾ-2)(ಇ), ದಿ:23.11.2022.
3. ಸರ್ಕಾರದ ನಡವಳಿಗಳ ಆದೇಶ ಸಂ:ಸಿಆಸುಇ/01/ಸಹಿಮ/2022, ದಿ:28.12.2022.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರ ನಡವಳಿ ಆದೇಶ ಸಂ:1554386/ಡಿಎಂಎ/ಇಎಸ್‌ಟಿ2/ಜಿಆರ್‌ಪಿಡಿ/31/2024, ದಿ:23.10.2024.

*****

ಸರ್ಕಾರದ ಉಲ್ಲೇಖ(1)ರಿಂದ (3)ರ ಆದೇಶಗಳನ್ವಯ, ಚಿತ್ರದುರ್ಗ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿಯಲ್ಲಿ ಖಾಲಿ ಉಳಿದಿರುವ **ಪೌರಕಾರ್ಮಿಕ** ಹುದ್ದೆಗಳಿಗೆ ನೇರಪಾವತಿಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖ(4)ರ ಆದೇಶದಂತೆ ನೌಕರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. **ಚಿತ್ರದುರ್ಗ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿ:07.08.2017ರ ಪೂರ್ವದಲ್ಲಿ ನೇಮಕಾತಿ ಹೊಂದಿ ಪ್ರಸ್ತುತ ನೇರಪಾವತಿಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರು ಮಾತ್ರ ಅರ್ಜಿಗಳನ್ನು ಸಲ್ಲಿಸತಕ್ಕದ್ದು, ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯ ನಿರ್ವಹಿಸುತ್ತಿರಬೇಕು.**
2. ಪೌರಕಾರ್ಮಿಕರ ಹುದ್ದೆಯ ವೇತನ ಶ್ರೇಣಿ ರೂ.27000.00 ರಿಂದ ರೂ.47675.00
3. **ವಿದ್ಯಾರ್ಹತೆಯ ಅವಶ್ಯಕತೆ ಇರುವುದಿಲ್ಲ, ಆದರೆ, ಕನ್ನಡ ಮಾತನಾಡಲು ಗೊತ್ತಿರಬೇಕು.**
4. ಮೀಸಲಾತಿ ಕೋರುವ ಅಭ್ಯರ್ಥಿಗಳು ಅರ್ಜಿಯ ಜೊತೆಗೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
5. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕಾಲಮಿತಿ ಹಾಗೂ ವಿಳಾಸ

| ವಿವರ | ದಿನಾಂಕ | ಅರ್ಜಿ ನಮೂನೆ ಪಡೆಯುವ/ಸಲ್ಲಿಸುವ ವಿಳಾಸ |
|---|---|---|
| ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಪ್ರಾರಂಭಿಕ ದಿನಾಂಕ | ದಿ:06.11.2024 (ಕಚೇರಿ ವೇಳೆಯಲ್ಲಿ) | ಸಂಬಂಧಿಸಿದ ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿ ಇವರಿಂದ ಅರ್ಜಿ ನಮೂನೆಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ ರವರಿಗೆ ಸಲ್ಲಿಸುವುದು. |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ದಿ:05.12.2024 (ಕಚೇರಿ ವೇಳೆಯಲ್ಲಿ) | |

**ಖಾಲಿ ಇರುವ ನೇರ ನೇಮಕಾತಿ ಪೌರಕಾರ್ಮಿಕರ ಹುದ್ದೆಗಳ ವಿವರ**

| ಕ್ರ ಸಂ | ನಗರ ಸ್ಥಳೀಯ ಸಂಸ್ಥೆ ಹೆಸರು | ಹುದ್ದೆಯ ಹೆಸರು | ಹಂಚಿಕೆ ಮಾಡಲಾದ ಹುದ್ದೆಗಳ ಸಂಖ್ಯೆ | ಮೀಸಲಾತಿ ವಿವರ |
|---|---|---|---|---|
| 01 | ನಗರಸಭೆ, ಚಿತ್ರದುರ್ಗ | ಪೌರಕಾರ್ಮಿಕ | 8 | ಬಿಂದು 31 ರಿಂದ 38 ರವರೆಗೆ<br>ಎಸ್.ಸಿ-1 (ಗ್ರಾಮೀಣ)<br>ಎಸ್.ಟಿ-1 (ಗ್ರಾಮೀಣ)<br>ಪ್ರವರ್ಗ-1 ರಲ್ಲಿ 1 (ಇತರೆ)<br>ಪ್ರವರ್ಗ-2ಎ ರಲ್ಲಿ 2(ಸಾ.ಗ್ರಾ)<br>ಪ್ರವರ್ಗ-2ಬಿ ರಲ್ಲಿ 1 (ಸಾ)<br>ಪ್ರವರ್ಗ-3ಎ ರಲ್ಲಿ 1 (ಸಾ)<br>ಪ್ರವರ್ಗ-3ಬಿ ರಲ್ಲಿ 1 (ಸಾ) |

For more job news visit : www.kpscvaani.com



| | | | | |
|---|---|---|---|---|
| 2 | ನಗರಸಭೆ ಹಿರಿಯೂರು | ಪೌರಕಾರ್ಮಿಕ | 6 | ಎಸ್.ಸಿ – ಅಂಗವಿಕಲ –1<br>ಎಸ್.ಸಿ – ಮಹಿಳೆ –1<br>ಪ್ರವರ್ಗ–2ಎ – ಅಂಗವಿಕಲ –1<br>ಸಾಮಾನ್ಯ – ಮಹಿಳೆ–1<br>ಸಾಮಾನ್ಯ – ಮಹಿಳೆ–1<br>ಸಾಮಾನ್ಯ – ಗ್ರಾಮೀಣ–1 |
| 3 | ಪುರಸಭೆ ಹೊಸದುರ್ಗ | ಪೌರಕಾರ್ಮಿಕ | 3 | ಸಾಮಾನ್ಯ – ಮಹಿಳೆ–1<br>ಸಾಮಾನ್ಯ – ಮಹಿಳೆ–1<br>ಪ್ರವರ್ಗ–2ಎ – ಅಂಗವಿಕಲ –1 |
| 4 | ಪುರಸಭೆ ಹೊಳಲ್ಕೆರೆ | ಪೌರಕಾರ್ಮಿಕ | 3 | ಸಾಮಾನ್ಯ – ಮಹಿಳೆ–1<br>ಪ್ರವರ್ಗ–3ಎ – ಇತರೆ–1<br>ಎಸ್.ಟಿ – ಮಹಿಳೆ–1 |
| 6 | ಪಟ್ಟಣ ಪಂಚಾಯಿತಿ ಮೊಳಕಾಲ್ಮೂರು | ಪೌರಕಾರ್ಮಿಕ | 3 | ಸಾಮಾನ್ಯ – ಗ್ರಾಮೀಣ–1<br>ಪ್ರವರ್ಗ–2ಎ –ಗ್ರಾಮೀಣ –1<br>ಪ್ರವರ್ಗ–3ಬಿ – ಇತರೆ–1 |
| 7 | ಪಟ್ಟಣ ಪಂಚಾಯಿತಿ ನಾಯಕನಹಟ್ಟಿ | ಪೌರಕಾರ್ಮಿಕ | 3 | ಎಸ್.ಸಿ – ಗ್ರಾಮೀಣ–1<br>ಪ್ರವರ್ಗ–2ಎ –ಮಹಿಳೆ –1<br>ಸಾಮಾನ್ಯ – ಇತರೆ–1 |

ನೇಮಕಾತಿ ವಿಧಾನ:

| | |
|---|---|
| 1 | ಅಭ್ಯರ್ಥಿಗಳ ಆಯ್ಕೆಯನ್ನು ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿಗೆ ಖಾಲಿ ಇರುವ ಪೌರಕಾರ್ಮಿಕ ಹುದ್ದೆಗಳಿಗೆ ಕರ್ನಾಟಕ ಪುರಸಭೆಗಳ ಕಾಯ್ದೆ 1964 ಕಲಂ 323 ರಲ್ಲಿನ (ಕರ್ನಾಟಕ ಕಾಯ್ದೆ 1964ರ ಸಂಖ್ಯೆ 22ರ ರೀತ್ಯಾ) ನೇರ ನೇಮಕಾತಿ (ವಿಶೇಷ) ನಿಯಮಗಳು–2022ರ ಪ್ರಕಾರ ನೇರಪಾವತಿ ಪೌರಕಾರ್ಮಿಕರನ್ನು ಮಾತ್ರ ಆಯ್ಕೆ ಮಾಡಲಾಗುವುದು. |
| 2 | ಅರ್ಜಿ ಸಲ್ಲಿಸುವ ಪೌರಕಾರ್ಮಿಕರು ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಲಿ ನೇರ ಪಾವತಿಯಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಮಾತ್ರ ಅರ್ಜಿಯನ್ನು ಸಲ್ಲಿಸುವುದು, ಅನ್ಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕರ್ತವ್ಯ ನಿರತ ಅಭ್ಯರ್ಥಿಗಳ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಮತ್ತು ಅಂಚೆ ಮೂಲಕ ಸ್ವೀಕೃತಿಯಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. |
| 3 | ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರಪಾವತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರರಿಗೆ 2017 ರಿಂದ ಈವರೆಗೂ ವೇತನ ಪಾವತಿಸಿರುವ ಬಗ್ಗೆ ದಾಖಲಾತಿ, ಹಾಜರಾತಿ ದೃಢೀಕೃತ ಪ್ರತಿ, ನೇರಪಾವತಿ ಪೌರಕಾರ್ಮಿಕರಿಗೆ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಕಾರ್ಮಿಕ ಭವಿಷ್ಯ ನಿಧಿ (ಇ.ಪಿ.ಎಫ್), ದಾಖಲಾತಿಗಳನ್ನು ಅರ್ಜಿಯೊಂದಿಗೆ ಸಲ್ಲಿಸುವುದು. |
| 4 | ಅರ್ಜಿ ಸಲ್ಲಿಸುವ ವೇಳೆ ನೇರಪಾವತಿ ಪೌರಕಾರ್ಮಿಕರ ವಯಸ್ಸು, ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮಗಳು ಅಥವಾ ಕರ್ನಾಟಕ ಪುರಸಭೆ(ಅಧಿಕಾರಿ/ನೌಕರರ ನೇಮಕಾತಿ) ನಿಯಮಗಳು 2010 ನಿಯಮಗಳಲ್ಲಿ ಏನೇ ಹೇಳಿದ್ದರೂ ಕನಿಷ್ಠ 18 ವರ್ಷದಿಂದ 55 ವರ್ಷ ಮೀರಬಾರದು. |
| 5 | ಅರ್ಜಿ ಸಲ್ಲಿಸುವ ನೇರಪಾವತಿ ಪೌರಕಾರ್ಮಿಕರ ಗರಿಷ್ಠ ವಯೋಮಿತಿ ಕನಿಷ್ಠ 18 ವರ್ಷ ಗರಿಷ್ಠ 55 ವರ್ಷಗಳು ಮೀರಕೂಡದು. ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ ವಿದ್ಯಾರ್ಹತೆ ದಾಖಲಾತಿಗಳು/ಆಧಾರ್ ಕಾರ್ಡ್/ಪಡಿತರ ಚೀಟಿ/ ಮತದಾರರ ಗುರುತಿನ ಚೀಟಿ (EPIC)/ ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು. |
| 6 | ಎರಡು ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಆಯ್ಕೆ ಮಾಡಲಾಗುವುದು. |

For more job news visit : www.kpscvaani.com



| | |
|---|---|
| 7 | ಉಪ ನಿಯಮ(2) ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಅದೇ ಪ್ರವರ್ಗದ ಮೀಸಲಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಅಭ್ಯರ್ಥಿಯಾಗಿರುವ ಮತ್ತೊಬ್ಬ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು. |
| 8 | ಉಪನಿಯಮ (2) ಮತ್ತು (5) ರಂತೆ ತಯಾರಿಸಲಾದ ಆಯ್ಕೆ ಪಟ್ಟಿಯನ್ನು ಆಯಾ ನಗರ ಸ್ಥಳೀಯ ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಳಿಸಿ ಮತ್ತು ಆಯ್ಕೆ ಪಟ್ಟಿಯನ್ನು ಚಿತ್ರದುರ್ಗ ಜಿಲ್ಲಾ ನಗರಾಭಿವೃದ್ಧಿ ಕೋಶದ ವೆಬ್‌ಸೈಟ್ ನಲ್ಲಿ ಪ್ರಚುರಪಡಿಸಲಾಗುವುದು. |
| 9 | ನಿಯಮ-4ರ ಉಪನಿಯಮ 6ರಲ್ಲಿ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅವರ ನೇಮಕಾತಿ ಹಕ್ಕು ಎಂದು ಪರಿಭಾವಿಸತಕ್ಕದ್ದಲ್ಲ. ಆಯ್ಕೆಯಾಗುವ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಕರೆದಾಗ ಜಿಲ್ಲಾಧಿಕಾರಿಗಳ ಕಛೇರಿ ಚಿತ್ರದುರ್ಗ ಇಲ್ಲಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು. |
| 10 | ಅಭ್ಯರ್ಥಿಯು ಸಲ್ಲಿಸಿರುವ ದಾಖಲೆಗಳು ತಪ್ಪು ಅಥವಾ ಸುಳ್ಳು ಎಂದು ಕಂಡುಬಂದಲ್ಲಿ ನೇಮಕಾತಿ ಆದೇಶ ರದ್ದು ಪಡಿಸುವುದಲ್ಲದೇ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. |
| 161 | ಸಾಮಾನ್ಯ ವರ್ಗ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಲಭ್ಯವಾಗದೇ ಇದ್ದ ಪಕ್ಷದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು. |
| 12 | ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ಹೆಚ್ಚುವರಿ ಷರತ್ತುಗಳನ್ನು ವಿಧಿಸುವ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು ಚಿತ್ರದುರ್ಗ ರವರು ಕಾಯ್ದಿರಿಸಿಕೊಂಡಿರುತ್ತಾರೆ. |

**ಅರ್ಜಿ ಸಲ್ಲಿಸುವ ವಿಧಾನ:**

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗಧಿತ ಅರ್ಜಿ ನಮೂನೆಯನ್ನು ಆಯಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು. ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು, ಅವುಗಳ ನಕಲು ಪ್ರತಿಗಳನ್ನು ಆಯಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ, ಅರ್ಜಿಯನ್ನು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಪೌರಕಾರ್ಮಿಕರ ನೇಮಕಾತಿ ಆಯ್ಕೆ ಪ್ರಾಧಿಕಾರ ಚಿತ್ರದುರ್ಗ ಜಿಲ್ಲೆ ರವರ ಹೆಸರಿಗೆ ಕಛೇರಿ ವೇಳೆಯಲ್ಲಿ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ ಇವರಿಗೆ ನಿಗಧಿತ ಅವಧಿಯಲ್ಲಿ ಅರ್ಜಿಯನ್ನು ಸಲ್ಲಿಸುವುದು. ಅವಧಿ/ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:**

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ (ಒಟ್ಟು 3)
2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಶೈಕ್ಷಣಿಕ ದಾಖಲೆಗಳು/ಆಧಾರ್ ಕಾರ್ಡ್/ಪಡಿತರ ಚೀಟಿ/ಮತದಾರರ ಗುರುತಿನ ಚೀಟಿ (EPIC) ದಾಖಲೆಗಳನ್ನು ಸಲ್ಲಿಸುವುದು.
3. ನೇರಪಾವತಿ ಪೌರಕಾರ್ಮಿಕರು 2017 ರಿಂದ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಬಗ್ಗೆ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ನೇರಪಾವತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಮತ್ತು 2017 ರಿಂದ ವೇತನ ಪಡೆದ ಬಗ್ಗೆ ದಾಖಲಾತಿ, ಅಯಾ ನಗರ ಸ್ಥಳೀಯ ಸಂಸ್ಥೆಗಳಿಂದ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಕಾರ್ಮಿಕ ಭವಿಷ್ಯ ನಿಧಿ (ಇ.ಪಿ.ಎಫ್) ಹಾಗೂ ಹಾಜರಾತಿ ದಾಖಲೆಗಳ ಪ್ರತಿಗಳನ್ನು ಪೌರಾಯುಕ್ತರು/ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಪಡೆದು ಸಲ್ಲಿಸತಕ್ಕದ್ದು.
4. ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ "ಡಿ" ಯಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ "ಇ" ಯಲ್ಲಿ, ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ ಗೆ ಸಂಬಂಧಿಸಿದ ಅಭ್ಯರ್ಥಿಗಳು ನಮೂನೆ "ಎಫ್" ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಉದ್ಯೋಗದ ಉದೇಶಕ್ಕಾಗಿ ಪಡೆದು ಸಲ್ಲಿಸತಕ್ಕದ್ದು.
5. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 96 ಸೇನನಿ 2005 ದಿನಾಂಕ:10/08/2005 ರ ಪ್ರಕಾರ ನಿಗಧಿತ ನಮೂನೆ-2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಪೌರಾಯುಕ್ತರು/ಮುಖ್ಯಾಧಿಕಾರಿಗಳು ದೃಢೀಕರಿಸಿ ಸಲ್ಲಿಸಬೇಕು.

For more job news visit : www.kpscvaani.com



6. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರ ತಿರಸ್ಕೃತಗೊಂಡಲ್ಲಿ, ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗಿರುತ್ತಾರೆ.
7. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ:19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ:ಸಿಅಸುಇ/115/ಸೇನನಿ/2005ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
8. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

<u>ವಿಶೇಷ ಸೂಚನೆಗಳು :</u>

1. ಅರ್ಜಿಯನ್ನು ಮಾರಾಟ ಮಾಡಲಾಗುವುದಿಲ್ಲ. ಅರ್ಜಿ ನಮೂನೆಯನ್ನು ಅಯಾಯ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳಿಂದ ಮಾತ್ರ ಪಡೆಯುವುದು.
2. ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ, ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಪೌರಕಾರ್ಮಿಕರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ, ಚಿತ್ರದುರ್ಗ ಜಿಲ್ಲೆ ರವರ ಹೆಸರಿನಲ್ಲಿ ನೇರವಾಗಿ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ ಇವರಿಗೆ ಸಲ್ಲಿಸುವುದು
3. ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು. ಹಾಗೂ ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ದಿನಾಂಕವು ಸಾರ್ವಜನಿಕ ದಿನವೆಂದು ಘೋಷಿಸಿದಲ್ಲಿ ಮುಂದಿನ ಕಚೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.
4. ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.
5. ಅಭ್ಯರ್ಥಿಯು ನಕಲಿ ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತಾವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
6. ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತವೆ.

ಜಿಲ್ಲಾಧಿಕಾರಿಗಳು, ಹಾಗೂ ಅಧ್ಯಕ್ಷರು,
ಪೌರಕಾರ್ಮಿಕರ ನೇರ ನೇಮಕಾತಿ(ವಿಶೇಷ)
ಆಯ್ಕೆ ಪ್ರಾಧಿಕಾರ, ಚಿತ್ರದುರ್ಗ ಜಿಲ್ಲೆ.

ಪ್ರತಿಯನ್ನು:-
ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಚೇರಿಯ ಅಧಿಕೃತ ಸೂಚನಾ ಫಲಕದಲ್ಲಿ ಹಾಗೂ ವೆಬ್ ಸೈಟ್ ನಲ್ಲಿ ಪ್ರಚುರಪಡಿಸಲು ಹಾಗೂ ನಿಮ್ಮ ಕಾರ್ಯಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೇರಪಾವತಿ ನೌಕರರ ಗಮನಕ್ಕೆ ತಂದು ಸಹಿ ಪಡೆದು ಸಲ್ಲಿಸಲು ಸೂಚಿಸಿದೆ.